## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: : 649 (712)

ಮಾನ್ಯ ಸದಸ್ಯರ ಹೆಸರು :ಶ್ರೀ ರಾಮೋಜಿ ಗೌಡ

( ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು :ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

ಉತ್ತರಿಸಬೇಕಾದ ದಿನಾಂಕ :18-08-2025

| ಕ್ರ. ಸಂ | ಪ್ರಶ್ನೆ | ಉತ್ತರ |
| --- | --- | --- |
| ಅ) | ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ವರ್ಗಾವಣೆ ಪ್ರಕ್ರಿಯೆಯು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಪ್ರಸಕ್ತ ಸಾಲಿನಲ್ಲಿ ಶಿಕ್ಷಕರ ವರ್ಗಾವಣೆ ಪ್ರಕ್ರಿಯೆ ಅಂಗವಾಗಿ ಹೆಚ್ಚುವರಿ ಶಿಕ್ಷಕರ ಸಮರ್ಪಕ ಮರುಹೊಂದಾಣಿಕೆ ಪ್ರಕ್ರಿಯೆಯನ್ನು ಕೈಗೊಳ್ಳಬೇಕಾಗಿದೆ. ಅದರಂತೆ ಪೂರ್ವಭಾವಿ ಕ್ರಮಗಳನ್ನು ಕೈಗೊಳ್ಳಲಾಗಿದೆ. ಯಾವುದೇ ವಿಳಂಬವಾಗಿರುವುದಿಲ್ಲ. |
| ಆ) | ವರ್ಗಾವಣೆ ಪ್ರಕ್ರಿಯೆ ಯಾವ ಹಂತದಲ್ಲಿದೆ ಹಾಗೂ ಯಾವ ಕಾಲಮಿತಿಯೊಳಗೆ ವರ್ಗಾವಣೆ ಪ್ರಕ್ರಿಯೆಯನ್ನು ಮುಕ್ತಾಯಗೊಳಿಸಲಾಗುವುದು; (ವಿವರವಾದ ಮಾಹಿತಿ ಒದಗಿಸುವುದು) | 2024-25ನೇ ಸಾಲಿನ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕ ವೃಂದ/ತತ್ಸಮಾನ ವೃಂದದ ಶಿಕ್ಷಕರು ಹಾಗೂ ಮುಖ್ಯೋಪಾಧ್ಯಾಯರು ಮತ್ತು ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರು/ತತ್ಸಮಾನ ವೃಂದ, ದೈಹಿಕ ಶಿಕ್ಷಣ ಶಿಕ್ಷಕರು ಮತ್ತು ಶಿಕ್ಷಕರು ಹಾಗೂ ಸರ್ಕಾರಿ ಪ್ರೌಢಶಾಲಾ ವಿಶೇಷ ಮುಖ್ಯ ಶಿಕ್ಷಕರು/ತತ್ಸಮಾನ ವೃಂದದ ಅಧಿಕಾರಿಗಳ ಸಾಮಾನ್ಯ ವರ್ಗಾವಣೆಗಳನ್ನು ಹಮ್ಮಿಕೊಳ್ಳುವ ಕುರಿತು ಪರಿಷ್ಕೃತ ವೇಳಾಪಟ್ಟಿಯನ್ನು ದಿನಾಂಕ: 08/08/2025 ರಂದು ಪ್ರಕಟಿಸಲಾಗಿದೆ.<br>• ವರ್ಗಾವಣೆಯಲ್ಲಿ ಹೆಚ್ಚುವರಿ ಶಿಕ್ಷಕರ ಸಮರ್ಪಕ ಮರುಹೊಂದಾಣಿಕೆ ಕೌನ್ಸಿಲಿಂಗ್.<br>• ನಿರ್ದಿಷ್ಟಪಡಿಸಿದ ಹುದ್ದೆಯಲ್ಲಿ 05 ವರ್ಷ ಪೂರೈಸಿದ ಶಿಕ್ಷಕರ ಹಿಮ್ಮುಖ ವರ್ಗಾವಣೆ ಕೌನ್ಸಿಲಿಂಗ್.<br>• ಶಿಕ್ಷಕರ ಕೋರಿಕೆ ವರ್ಗಾವಣೆ- ಪರಸ್ಪರ ವರ್ಗಾವಣೆ (ಜಿಲ್ಲೆಯ ಒಳಗೆ-ವಿಭಾಗದ ಒಳಗೆ-ವಿಭಾಗದ ಹೊರಗೆ) |

| | | |
|---|---|---|
| | | ಪ್ರಕ್ರಿಯೆಯನ್ನು ವಿವಿಧ ಹಂತಗಳಲ್ಲಿ ಕೈಗೊಳ್ಳಲಾಗುತ್ತಿದೆ.<br>ಸಂಪೂರ್ಣ ವರ್ಗಾವಣೆ ಕೌನ್ಸಿಲಿಂಗ್ ಪ್ರಕ್ರಿಯೆಯು ದಿನಾಂಕ: 18/10/2025 ರಂದು ಮುಕ್ತಾಯವಾಗುತ್ತದೆ. |
| ಇ) | ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಮಾರಕವಾಗದಂತೆ ಬೇಸಿಗೆ ರಜೆಯ ಅವಧಿಯಲ್ಲಿ ವರ್ಗಾವಣೆ ಪ್ರಕ್ರಿಯೆ ಪೂರ್ಣಗೊಳಿಸುವ ಯೋಜನೆ ಕುರಿತು ಸರ್ಕಾರ/ಇಲಾಖೆ ಚಿಂತಿಸಲಾಗಿದೆಯೇ? | ಹೌದು.<br>ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು ಶಿಕ್ಷಕರ ವರ್ಗಾವಣೆ ನಿಯಂತ್ರಣ ನಿಯಮ-2020 ರ ನಿಯಮ-6 ರ ಪ್ರಕಾರ ಸಾಮಾನ್ಯ ವರ್ಗಾವಣೆಗಳನ್ನು ಏಪ್ರಿಲ್-ಮೇ ತಿಂಗಳಲ್ಲಿ ಕೈಗೊಳ್ಳಬೇಕೆಂಬ ನಿಯಮವಿರುವುದರಿಂದ ಮುಂದಿನ ಸಾಲಿನ ವರ್ಗಾವಣೆಯನ್ನು ನಿಯಮಾನುಸಾರ ಬೇಸಿಗೆ ಅವಧಿಯಲ್ಲಿ ಕೈಗೊಳ್ಳಲು ಕ್ರಮವಹಿಸಲಾಗುವುದು. |

**ಇಪಿ 99 ಪಿಎಂಎ 2025**

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ
ಸಚಿವರು